ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ,ಬೆಂಗಳೂರು-12.

ಸಂಖ್ಯೆ : ಪಪೂಶಿಇ/ಶೈಶಾ/ಸಂ.ದಿ.ಆ/2021-22 ದಿನಾಂಕ : 11-11-2021

## ಸುತ್ತೋಲೆ

ವಿಷಯ : ಪದವಿ ಪೂರ್ವ ಕಾಲೇಜುಗಳಲ್ಲಿ ನವೆಂಬರ್ 26 ರಂದು " ಸಂವಿಧಾನ ದಿವಸ " ವನ್ನು ಆಚರಿಸುವ ಕುರಿತು.

ಉಲ್ಲೇಖ : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಕಛೇರಿ ಪತ್ರ ಸಂಖ್ಯೆ ; P.S.E.S.M/177/2021-22. Date : 02-11-2021.

******

ಭಾರತ ಸಂವಿಧಾನವು 26 ನವೆಂಬರ್ 1949 ರಂದು ಭಾರತ ಸಂವಿಧಾನದ ಸಭೆಯಲ್ಲಿ ಅಂಗೀಕರಿಸಲ್ಪಟ್ಟ ನೆನಪಿಗಾಗಿ ಪ್ರತಿ ವರ್ಷ ನವೆಂಬರ್ 26 ರ ದಿನವನ್ನು ಸಂವಿಧಾನ ದಿವಸವಾಗಿ ಆಚರಿಸಬೇಕೆಂದು 11 ಅಕ್ಟೋಬರ್ 2015 ರಂದು ಘೋಷಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಭಾರತದ ಸಂವಿಧಾನದ ಬಗ್ಗೆ ಅರಿವನ್ನು ಮೂಡಿಸಲು ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಸಂವಿಧಾನದ ಪ್ರಸ್ತಾವನೆಯನ್ನು ಕಡ್ಡಾಯವಾಗಿ ಓದಲು ಹಾಗೂ ಸಂವಿಧಾನದ ಬಗ್ಗೆ ಅರಿವು ಮೂಡಿಸುವಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅಗತ್ಯ ಕ್ರಮ ವಹಿಸುವಂತೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಉಲ್ಲೇಖಿತ ಪತ್ರದಲ್ಲಿ ಸೂಚಿಸಿರುತ್ತಾರೆ, ಹಾಗೂ ಸದರಿ ದಿನದಂದು ಮಾನ್ಯ ಸಚಿವರು ಶಾಲಾ-ಕಾಲೇಜುಗಳಲ್ಲಿ ನಡೆಯುವ ಕೆಲವು ಕಾರ್ಯಕ್ರಮಗಳಲ್ಲಿ ಭಾಗವಹಿಸುವುದಾಗಿ ತಿಳಿಸಿರುತ್ತಾರೆ.

ಆದ್ದರಿಂದ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ " ಸಂವಿಧಾನ ದಿವಸ " ಆಚರಣೆ ಸಂಬಂಧ ಸಂವಿಧಾನದ ಪ್ರಸ್ತಾವನೆಯನ್ನು ಓದುವ ಮತ್ತು ಸಂವಿಧಾನದ ಬಗ್ಗೆ ವಿದ್ಯಾರ್ಥಿಗಳಿಗೆ ಅರಿವು ಮೂಡಿಸುವಂತಹ ಅನೇಕ ಕಾರ್ಯಕ್ರಮಗಳನ್ನು ನಡೆಸಲು ಹಾಗೂ ನಡೆಸಿದ ಕಾರ್ಯಕ್ರಮಗಳ ಮಾಹಿತಿಯನ್ನು ಕೇಂದ್ರ ಕಛೇರಿಯ ಇ-ಮೇಲ್ academic.pue@gmail.com ವಿಳಾಸಕ್ಕೆ ಕಳುಹಿಸಲು ತಿಳಿಸುವಂತೆ ಈ ಮೂಲಕ ಸೂಚಿಸಿದೆ.

R Kusum
11/11/2021

ಜಂಟಿ ನಿರ್ದೇಶಕರು(ಶೈಕ್ಷಣಿಕ)
ಪದವಿ ಪೂರ್ವ ಶಿಕ್ಷಣ ಇಲಾಖೆ

ಮಾಹಿತಿಗಾಗಿ,

1. ಆಪ್ತ ಕಾರ್ಯದರ್ಶಿಗಳು, ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು, ಕೊಠಡಿ ಸಂಖ್ಯೆ 262 ಮತ್ತು 262-ಎ, ಎರಡನೇ ಮಹಡಿ, ವಿಧಾನಸೌಧ, ಬೆಂಗಳೂರು-01.
2. ಆಪ್ತ ಕಾರ್ಯದರ್ಶಿಗಳು, ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

ಪ್ರತಿಗಳು,

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ-ಮುಂದಿನ ಸೂಕ್ತ ಕ್ರಮಕ್ಕಾಗಿ,
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಉಪ ನಿರ್ದೇಶಕರುಗಳ ಮೂಲಕ.
3. ಸಹಾಯಕ ನಿರ್ದೇಶಕರು ಇ-ಆಡಳಿತ, ಇಲಾಖಾ ಜಾಲತಾಣದಲ್ಲಿ ಅಳವಡಿಸಲು.
4. ಹೆಚ್ಚುವರಿ/ಕಛೇರಿ ಪ್ರತಿ.